ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು.

ದೂರವಾಣಿ ಸಂಖ್ಯೆ:0821-2424079, 2422110, 2428383

ಫ್ಯಾಕ್ಸ್ ನಂ : 2429012 & 2428383 E-Mail : dcofficemysuru@gmail.com

MYSDC/MAG1/MLO/71/2020(E-95753) ದಿನಾಂಕ: 26-03-2020

ಆದೇಶ

ವಿಷಯ: ವೈದ್ಯರು/ಪ್ಯಾರಾಮೆಡಿಕಲ್/ಆರೋಗ್ಯ ಸೇವೆಗಳಲ್ಲಿ ತೊಡಗಿರುವವರನ್ನು ಬಾಡಿಗೆ /ಭೋಗ್ಯ ಇರುವ ಮನೆಗಳಿಂದ ತೆರವುಗೊಳಿಸದಂತೆ ಆದೇಶ ಹೊರಡಿಸಿರುವ ಬಗ್ಗೆ.

ಉಲ್ಲೇಖ: 1.ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್ -2020ರ ಅಧಿಸೂಚನೆ ಸಂಖ್ಯೆ: ಹೆಚ್.ಎಫ್.ಡಬ್ಲ್ಯೂ,54 ಸಿ ಜಿ ಎಂ 2020 ದಿನಾಂಕ: 11.03.2020.

2.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರ ಆದೇಶ ಪತ್ರ ಸಂಖ್ಯೆ: ಎಚ್ ಎಫ್ ಡಬ್ಲೂ 54 ಸಿಜಿಎಂ 2020 ದಿನಾಂಕ: 26-0-2020.

DISTRICT MAGISTRATE ಜಿಲ್ಲಾದಂಡಾಧಿಕಾರಿ ಮೈಸೂರು ಜಿಲ್ಲೆ ಮೈಸೂರು MYSURU DISTRICT MYSURU

*******

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರು ಉಲ್ಲೇಖ (2) ರ ಆದೇಶದಲ್ಲಿ ವೈದ್ಯಕೀಯ ಸೇವೆಯಲ್ಲಿ ತೊಡಗಿರುವ ವೈದ್ಯರು/ಪ್ಯಾರಾಮೆಡಿಕಲ್/ಆರೋಗ್ಯ ಸೇವೆಗಳಲ್ಲಿ ನಿರತರಾಗಿರುವ ಸಿಬ್ಬಂದಿಗಳು ಬಾಡಿಗೆ /ಭೋಗ್ಯದ ಆಧಾರದ ಮೇಲೆಇರುವಂತಹ ಮನೆಗಳ ಮಾಲೀಕರು ಅವರುಗಳನ್ನು ಮನೆಯನ್ನು ಖಾಲಿ ಮಾಡುವಂತೆ ಒತ್ತಡ ಹೇರುತ್ತಿರುವ ಬಗ್ಗೆ ದೂರುಗಳು ಬಂದಿರುವುದರಿಂದ ಅಂತಹ ಕ್ರಮಗಳಿಗೆ ಅವಕಾಶ ನೀಡದಂತೆ ಹಾಗೂ ಅಂತಹ ಮನೆ ಮಾಲೀಕರ ವಿರುದ್ಧ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಲು ನಿರ್ದೇಶನ ನೀಡಿ ಆದೇಶ ಹೊರಡಿಸಿರುತ್ತಾರೆ.

ಆದುದರಿಂದ ಕರ್ನಾಟಕ ಸಾಂಕ್ರಾಮಿಕ ರೋಗಗಳು, COVID-19 ರೆಗ್ಯೂಲೇಷನ್ಸ್-2020ರ ನಿಯಮ 12 ರಲ್ಲಿ ಹಾಗೂ Disaster Management Act 2005 ಕಲಂ 24 ಮತ್ತು 34 ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ವೈದ್ಯಕೀಯ ಸೇವೆಯಲ್ಲಿ ತೊಡಗಿರುವ ವೈದ್ಯರು/ಪ್ಯಾರಾಮೆಡಿಕಲ್/ಆರೋಗ್ಯ ಸೇವೆಗಳಲ್ಲಿ ನಿರತರಾಗಿರುವ ಸಿಬ್ಬಂದಿಗಳು ಬಾಡಿಗೆ /ಭೋಗ್ಯದ ಆಧಾರದ ಮೇಲೆಇರುವಂತಹ ಮನೆಗಳ ಮಾಲೀಕರು ಅವರುಗಳನ್ನು ಮನೆಯನ್ನು ಖಾಲಿ ಮಾಡುವಂತೆ ಒತ್ತಡ ಹೇರದಂತೆ ಹಾಗೂ ಅವರುಗಳನ್ನು ಮನೆ ಖಾಲಿ ಮಾಡಿಸದಂತೆ ಆದೇಶ ಹೊರಡಿಸಿದೆ.

ಅಂತಹ ಪ್ರಕರಣಗಳೇನಾದರೂ ಕಂಡು ಬಂದಲ್ಲಿ ಅಂತಹ ಮನೆ ಮಾಲೀಕರ ವಿರುದ್ಧ ಕ್ರಮಗಳನ್ನು ತೆಗೆದುಕೊಳ್ಳಲು ಪೋಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು ಹಾಗೂ ಪೋಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು ರವರನ್ನು ಕೋರಲಾಗಿದೆ.

ಜಿಲ್ಲಾಧಿಕಾರಿ<br>
ಹಾಗೂ ಜಿಲ್ಲಾ ದಂಡಾಧಿಕಾರಿ<br>
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:- ಕೆಳಕಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು